**ಕರ್ನಾಟಕ ಸರ್ಕಾರ**

ಸಂಖ್ಯೆ:ಕಂಇ.48.ಸಮಿತಿ.2010(ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:30/7/2010

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ:

1) ಪ್ರಾದೇಶಿಕ ಆಯುಕ್ತರು,
ಬೆಂಗಳೂರು/ಗುಲ್ಬರ್ಗಾ/ಬೆಳಗಾಂ ವಿಭಾಗಗಳು

2) ಜಿಲ್ಲಾಧಿಕಾರಿಗಳು,
ಬೆಂಗಳೂರು/ಗುಲ್ಬರ್ಗಾ/ಬೆಳಗಾಂ ವಿಭಾಗಗಳ ಜಿಲ್ಲೆಗಳು

ಮಾನ್ಯರೇ,

ವಿಷಯ:- Revenue Management Information System (RMIS) ಅನ್ನು ರಾಜ್ಯದ ಎಲ್ಲಾ ವಿಭಾಗಗಳ ಕಂದಾಯ ಕಚೇರಿಯಲ್ಲಿ ಅನುಷ್ಠಾನಗೊಳಿಸುವ ಕುರಿತು

ಉಲ್ಲೇಖ:- ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆ ದಿನಾಂಕ:9/7/2010ರ ನಡವಳಿ.

88888

ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರು ಮೈಸೂರು ವಿಭಾಗದಲ್ಲಿ ಕಂದಾಯ ಇಲಾಖೆ ಪ್ರಗತಿ ವರದಿಗಳ ಮಾಹಿತಿಯನ್ನು Web based Online Monitoring System ಮೂಲಕ ಪಡೆಯುವ ಸದುದ್ದೇಶದಿಂದ Revenue Management Information System (RMIS) ಅನ್ನು NIC ರವರ ಸಹಯೋಗದಿಂದ ಅನುಷ್ಠಾನಗೊಳಿಸಿದ್ದು, ಇದು 92 ಡಾಟಾ ಎಂಟ್ರಿ ನಮೂನೆಗಳನ್ನು ಹಾಗೂ 115 ಪ್ರಗತಿ ವರದಿಗಳ ನಮೂನೆಗಳನ್ನು ಹೊಂದಿರುತ್ತದೆ. ಈಗಾಗಲೇ ಮೈಸೂರು ವಿಭಾಗದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಚೇರಿಗಳಲ್ಲಿ, ಉಪವಿಭಾಗಾಧಿಕಾರಿಗಳ ಕಚೇರಿಗಳಲ್ಲಿ ಹಾಗೂ ತಹಸೀಲ್ದಾರರ ಕಚೇರಿಗಳಲ್ಲಿ ಪ್ರಗತಿ ವರದಿಗಳ ಮಾಹಿತಿಯನ್ನು ಈ ವ್ಯವಸ್ಥೆಯಲ್ಲಿ ಅಳವಡಿಸಲಾಗುತ್ತಿದೆ.

ದಿನಾಂಕ:9-7-2010 ರಂದು ಸರ್ಕಾರದ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಯಲ್ಲಿನ ವಿಷಯ ಸಂಖ್ಯೆ: VI ಕಂಡಿಕೆ 18 ರಲ್ಲಿ ರಾಜ್ಯದ ಎಲ್ಲಾ ವಿಭಾಗಗಳಲ್ಲಿ Revenue Management Information System (RMIS)ನ್ನು ಅನುಷ್ಠಾನಗೊಳಿಸಿ ಪ್ರಗತಿ ವರದಿಗಳ ಮಾಹಿತಿಯನ್ನು ಈ ವ್ಯವಸ್ಥೆಯಲ್ಲಿ ಅಳವಡಿಸಬೇಕು; ಆದಕಾರಣ ಉಳಿದ ವಿಭಾಗಗಳಲ್ಲಿ ಈ ವ್ಯವಸ್ಥೆಯನ್ನು ಅಳವಡಿಸಲು ಕ್ರಮ ವಹಿಸುವಂತೆ ಬೆಂಗಳೂರು, ಗುಲ್ಬರ್ಗಾ ಮತ್ತು ಬೆಳಗಾಂ ವಿಭಾಗಗಳ ಪ್ರಾದೇಶಿಕ ಆಯುಕ್ತರುಗಳಿಗೆ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆಯವರು ತಿಳಿಸಿರುತ್ತಾರೆ.

Revenue Management Information System ಅನ್ನು ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರುರವರ Website: http://www.rcmysore.gov.in ನಿಂದ ಪಡೆಯಬಹುದಾಗಿದೆ. ಆದುದರಿಂದ ಇದರ ಬಗ್ಗೆ ತ್ವರಿತವಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

ಸಹಿ

(ಎಂ.ವೆಂಕಟರಸಪ್ಪ)
ಸರ್ಕಾರದ ಉಪಕಾರ್ಯದರ್ಶಿ
ಕಂದಾಯ ಇಲಾಖೆ. (ಸಮನ್ವಯ)

ಪ್ರತಿಯನ್ನು ಗೌರವಗಳೊಂದಿಗೆ ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.